



ದಿನಾಂಕ:15-06-2023ರಿಂದ ಮೂರು ದಿನಗಳ ಕಾಲ ಮುಂಬೈನ ಜಿಯೋವರ್ಲ್ಡ್ ಕನ್‌ವೆನ್ಷನ್ ಸೆಂಟರ್‌ನಲ್ಲಿ ನಡೆಯುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಶಾಸಕರ ಸಮ್ಮೇಳನದಲ್ಲಿ ಕರ್ನಾಟಕ ವಿಧಾನಪರಿಷತ್ತಿನ ಸಭಾಪತಿಯವರಾದ ಮಾನ್ಯಶ್ರೀ ಬಸವರಾಜ ಹೊರಟ್ಟಿಯವರು ವಿಶೇಷ ಪ್ರತಿನಿಧಿಯಾಗಿಭಾಗವಹಿಸಿದ್ದಾರೆ. ಲೋಕಸಭೆಯ ಮಾಜಿ ಸಭಾಧ್ಯಕ್ಷರಾದ ಸುಮಿತ್ರಾ ಮಹಾಜನ್ ಡಾ. ಮೀರಾ ಕುಮಾರ್ ಶಿವರಾಜ್ ಪಾಟೀಲ್, ಡಾ. ಮನೋಹರ್ ಜೋಷಿ ಸೇರಿದಂತೆ ದೇಶದ ಪ್ರಮುಖ ಸಂಸದೀಯಪಟುಗಳು ಹಾಗೂ ವಿಧಾನಸಭಾಧ್ಯಕ್ಷರಾದ ಮಾನ್ಯಶ್ರೀ ಯು.ಟಿ.ಖಾದರ್ ಸೇರಿದಂತೆ ದೇಶದ ಎಲ್ಲಾ ರಾಜ್ಯಗಳ ವಿಧಾನಸಭೆಯ ಸಭಾಧ್ಯಕ್ಷರುಗಳು ಹಾಗೂ ವಿಧಾನ ಪರಿಷತ್ತಿನ ಸಭಾಪತಿಗಳು ಶಾಸಕರು ಸಮ್ಮೇಳನದಲ್ಲಿ ಪಾಲ್ಗೊಂಡಿದ್ದರು.

ಮೊದಲ ದಿನದ ಪೂರ್ವಬಾವಿ ಸಭೆಯಲ್ಲಿ ವಿಧಾನ ಪರಿಷತ್ತಿನ ಸಭಾಪತಿ ಮಾನ್ಯಶ್ರೀ ಬಸವರಾಜ ಹೊರಟ್ಟಿ ಅವರು ತಮ್ಮ ಸುಧೀರ್ಘ ನಾಲ್ಕು ದಶಕಗಳ ಶಾಸನ ಸಭೆಯ ಮಹತ್ವ ಹಾಗೂ ಶಾಸಕರ ಕರ್ತವ್ಯಗಳ ಕುರಿತು ಮಾತನಾಡಿದರು.